Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

03.01.2025 14.30 hrs

<><*<><>*><>

ಮುಖ್ಯಾಂಶಗಳು

- **ಮಾನಸಿಕ ಆರೋಗ್ಯ ರಕ್ಷಣೆ ಮತ್ತು ಮನೊರೋಗಗಳ ಚಿಕಿತ್ಸಾ ಕ್ಷೇತ್ರಗಳಿಗೆ ನಿಮ್ಹಾನ್ಸ್ ಕೊಡುಗೆ ಶ್ಲಾಘನೀಯ - ರಾಷ್ಟ್ರಪತಿ ದ್ರೌಪದಿ ಮುರ್ಮು**
- **ಬಸ್ ಪ್ರಯಾಣ ದರ ಏರಿಕೆ ವಿರೋಧಿಸಿ ಬಿಜೆಪಿ ರಾಜ್ಯವ್ಯಾಪಿ ಪ್ರತಿಭಟನೆ**
- **ಇಂದು ಸಮಾಜ ಸುಧಾರಕಿ ಸಾವಿತ್ರಿಬಾಯಿ ಫುಲೆ ಜನ್ಮದಿನ**
- **ಮೈಸೂರಿನಲ್ಲಿ ಇದೇ ೧೪ ರಿಂದ ೧೯ ರವರೆಗೆ ರಾಷ್ಟ್ರೀಯ ಬಹುರೂಪಿ ನಾಟಕೋತ್ಸವ**

<><*<><>*><>

ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಕ್ಷೇತ್ರಕ್ಕೆ ಬೆಂಗಳೂರಿನಲ್ಲಿರುವ ನಿಮ್ಹಾನ್ಸ್ ಸಂಸ್ಥೆಯ ಕೊಡುಗೆ ಶ್ಲಾಘನೀಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಅಧ್ಯಯನ ಸಂಸ್ಥೆ-ನಿಮ್ಹಾನ್ಸ್‌ನ ಸುವರ್ಣ ಮಹೋತ್ಸವ ಸಮಾರಂಭದಲ್ಲಿಂದು ಮಾತನಾಡಿದ ಅವರು, ಮಾನಸಿಕ ಚಿಕಿತ್ಸೆ ಕ್ಷೇತ್ರದಲ್ಲಿ ಸಾಮಾಜಿಕ ಕಳಂಕ ಸವಾಲಾಗಿರುವ ಹಿನ್ನೆಲೆಯಲ್ಲಿ ಟೆಲಿ ಮಾನಸ್ ಮೂಲಕ ನಿಮ್ಹಾನ್ಸ್, ಜನಸಾಮಾನ್ಯರನ್ನು ತಲುಪುತ್ತಿದೆ. ಉತ್ತಮ ಗುಣಮಟ್ಟದ ಸಂಶೋಧನೆ ಮತ್ತು ಅಧ್ಯಯನ, ವ್ಯಾಸಂಗ ಕ್ಷೇತ್ರಗಳಲ್ಲಿ ತನ್ನದೇ ಆದ ಛಾಪು ಮೂಡಿಸಿದೆ ಎಂದು ಹೇಳಿದರು.

******ಧ್ವನಿ***ರಾಷ್ಟ್ರಪತಿ**

ಸಾಂಪ್ರದಾಯಿಕ ಜ್ಞಾನಗಳಾದ ಯೋಗ ಮತ್ತು ಆಯುರ್ವೇದ ಶಾಸ್ತ್ರಗಳ ನೆರವಿನೊಂದಿಗೆ ಮಾನಸಿಕ ಆರೋಗ್ಯ ಚಿಕಿತ್ಸಾ ವಿಧಾನಗಳನ್ನು ನಿಮ್ಹಾನ್ಸ್ ಅಭಿವೃದ್ಧಿಪಡಿಸಿರುವುದು ಗಮನಾರ್ಹ. ಆತ್ಮಹತ್ಯೆಯಂತಹ ವಿಪರೀತದ ಸ್ಥಿತಿಗಳಿಗೆ ಹೋಗುವ ವ್ಯಕ್ತಿಗಳಿಗೆ ಮುಂಚಿತವಾಗಿಯೇ ಆಪ್ತ ಸಮಾಲೋಚನೆಯ ಮೂಲಕ ಸಾಂತ್ವನ ನೀಡಿ, ಜೀವ ಉಳಿಸುವ ಪ್ರಯತ್ನ ಮಾಡುತ್ತಿದೆ. ಟೆಲಿ ಮಾನಸ್ ವ್ಯವಸ್ಥೆ ಇದುವರೆಗೆ ೭೦ ಲಕ್ಷ ಜನರನ್ನು ತಲುಪಿದೆ ಎಂದು ರಾಷ್ಟ್ರಪತಿ ಹೇಳಿದರು. ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಮಾತನಾಡಿ, ನಿಮ್ಹಾನ್ಸ್‌ನ ಐದು ದಶಕಗಳ ಯಾತ್ರೆ ಶ್ಲಾಘನೀಯ. ಇದಕ್ಕಾಗಿ ಎಲ್ಲ ವೈದ್ಯರು ಮತ್ತು ಅಧಿಕಾರಿ ವರ್ಗಕ್ಕೆ ಅಭಿನಂದನೆಗಳು ಎಂದರು. ನಿಮ್ಹಾನ್ಸ್, ಪ್ರತಿವರ್ಷ ಅಂದಾಜು ೭ ಲಕ್ಷ ಜನರಿಗೆ ಚಿಕಿತ್ಸೆ ನೀಡುತ್ತಿದೆ. ೧೧ ಲಕ್ಷ ಜನರಿಗೆ ಲ್ಯಾಬ್

ವ್ಯವಸ್ಥೆಯನ್ನು ತಲುಪಿಸಲಾಗಿದೆ. ಅತ್ಯಾಧುನಿಕ ಯಂತ್ರಗಳ ನೆರವಿನೊಂದಿಗೆ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ ಎಂದರು. ದೇಶದ ಮೊದಲ ೨೦೦ ಅತ್ಯುತ್ತಮ ಆಸ್ಪತ್ರೆಗಳ ಸಾಲಿನಲ್ಲಿ ನಿಮ್ಹಾನ್ಸ್ ಸ್ಥಾನ ಪಡೆದಿದೆ. ನಿಮ್ಹಾನ್ಸ್ ಆಸ್ಪತ್ರೆಗೆ ಎನ್‌ಎಬಿಎಚ್ ಮಾನ್ಯತೆ ದೊರೆತಿದೆ ಎಂದರು. ಟೆಲಿ ಮಾನಸ್ ವ್ಯವಸ್ಥೆಯಲ್ಲಿ ಎರಡು ಸಾವಿರ ತಜ್ಞರು ಕಾರ್ಯ ನಿರ್ವಹಿಸುತ್ತಿರುವುದು ಗಮನಾರ್ಹ. ೨೦೪೭ರ ವೇಳೆಗೆ ತಾನು ಹಮ್ಮಿಕೊಂಡಿರುವ ಗುರಿಯ ಬಗ್ಗೆ ನಿಮ್ಹಾನ್ಸ್, ನೀಲಿನಕ್ಷೆ ಸಿದ್ಧಪಡಿಸಬೇಕು ಎಂದು ಜೆ.ಪಿ. ನಡ್ಡಾ ಸಲಹೆ ನೀಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ಪಾರ್ಶ್ವವಾಯು, ಮೆದುಳಿನ ಆಘಾತಗಳು, ಮಾನಸಿಕ ರೋಗಿಗಳ ಚಿಕಿತ್ಸೆ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ನಿಮ್ಹಾನ್ಸ್ ಜಾಗತಿಕ ಮಟ್ಟದಲ್ಲಿ ಹೆಸರುವಾಸಿಯಾಗಿದೆ. ಆಘಾತ ನಿರ್ವಹಣೆ ಕ್ಷೇತ್ರಕ್ಕೆ ನಿಮ್ಹಾನ್ಸ್ ಕೊಡುಗೆ ಅಪಾರ ಎಂದರು.

*****ಧ್ವನಿ*** ಮುಖ್ಯಮಂತ್ರಿ**

ಕರ್ನಾಟಕ ಸರ್ಕಾರ, ಪ್ರತಿ ವರ್ಷ ನಿಮ್ಹಾನ್ಸ್‌ಗೆ ೧೩೭ ಕೋಟಿ ರೂಪಾಯಿ ಅನುದಾನ ನೀಡುತ್ತಿದೆ ಎಂದು ಮುಖ್ಯಮಂತ್ರಿ ಹೇಳಿದರು. ಸಮಾರಂಭದಲ್ಲಿ ಸಂಸದರಾದ ಪಿ.ಸಿ. ಮೋಹನ್, ತೇಜಸ್ವಿ ಸೂರ್ಯ, ಡಾ. ಮಂಜುನಾಥ್, ಯದುವೀರ ಒಡೆಯರ್, ರಾಜ್ಯ ಆರೋಗ್ಯ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮೊದಲಾದ ಗಣ್ಯರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು ಆದರದಿಂದ ಬರಮಾಡಿಕೊಂಡರು. ರಾಷ್ಟ್ರಪತಿ ಅವರು ಇಂದು ಮಧ್ಯಾಹ್ನ ಬೆಳಗಾವಿಗೆ ಭೇಟಿ ನೀಡಲಿದ್ದಾರೆ. ಕೆ.ಎಲ್.ಇ. ಸಂಸ್ಥೆಯಲ್ಲಿ, ಅತ್ಯಾಧುನಿಕ ತಂತ್ರಜ್ಞಾನ ವ್ಯವಸ್ಥೆಯೊಂದಿಗೆ ನಿರ್ಮಾಣಗೊಂಡ, ಡಾಕ್ಟರ್ ಸಂಪತ್‌ಕುಮಾರ ಶಿವಣಗಿ ಕ್ಯಾನ್ಸರ್ ಆಸ್ಪತ್ರೆಯನ್ನು ಉದ್ಘಾಟಿಸಲಿದ್ದಾರೆ.

<><*<><>*><>

ರಾಜ್ಯದಲ್ಲಿ ಬಸ್ ಪ್ರಯಾಣ ದರವನ್ನು ಹೆಚ್ಚಿಸುವ ಕುರಿತು ಸರ್ಕಾರ ತೆಗೆದುಕೊಂಡಿರುವ ನಿರ್ಧಾರವನ್ನು ವಿರೋಧಿಸಿ ಪ್ರತಿಪಕ್ಷ ಬಿಜೆಪಿ ಕಾರ್ಯಕರ್ತರು ಇಂದು ರಾಜ್ಯ ವ್ಯಾಪಿ ಪ್ರತಿಭಟನೆ ನಡೆಸುತ್ತಿದ್ದಾರೆ. ಬೆಂಗಳೂರು ಮೆಜೆಸ್ಟಿಕ್‌ನಲ್ಲಿ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು. ಮೈಸೂರು, ಹುಬ್ಬಳ್ಳಿ ಮೊದಲಾದ ಕಡೆ ಪ್ರತಿಭಟನೆ ನಡೆಸಲಾಗಿದೆ.

<><*<><>*><>

ದೇಶ ಕಂಡ ಶ್ರೇಷ್ಠ ಸಮಾಜ ಸುಧಾರಕರಲ್ಲಿ ಒಬ್ಬರಾದ ಸಾವಿತ್ರಿಬಾಯಿ ಫುಲೆ ಅವರ ಜನ್ಮ ದಿನವನ್ನು ಇಂದು ಆಚರಿಸಲಾಗುತ್ತಿದೆ. ಮಹಿಳೆಯರ ಸಬಲೀಕರಣಕ್ಕೆ ಚಾಲನೆ ನೀಡಿದ ಹಾಗೂ

ಶಿಕ್ಷಣ ಮತ್ತು ಸಾಮಾಜಿಕ ಪರಿವರ್ತನೆ ಕ್ಷೇತ್ರಗಳಿಗೆ ಸಲ್ಲಿಸಿದ ಅಮೂಲ್ಯ ಕೊಡುಗೆಗಾಗಿ ಭಾರತ ಸಾವಿತ್ರಿಬಾಯಿ ಫುಲೆ ಅವರನ್ನು ಸದಾ ಸ್ಮರಿಸುತ್ತದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ಸಂದೇಶ ನೀಡಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಸಂದೇಶದಲ್ಲಿ ಮಹಿಳೆಯರ ಶಿಕ್ಷಣ ಅವಕಾಶ ವಂಚಿತರ ಹಕ್ಕುಗಳ ರಕ್ಷಣೆ ಸಮಾಜದ ದುರ್ಬಲ ವರ್ಗಗಳ ಏಳಿಗೆಗಾಗಿ ಸಾವಿತ್ರಿಬಾಯಿ ಫುಲೆ ಅವಿರತ ಶ್ರಮಿಸಿದ್ದರು ಎಂದು ಹೇಳಿದ್ದಾರೆ. ಶತಮಾನಗಳ ಕಾಲ ಅವಕಾಶಗಳಿಂದ ವಂಚಿತರಾಗಿದ್ದ ಮಹಿಳೆಯರ ಸಬಲೀಕರಣಕ್ಕಾಗಿ ಶಿಕ್ಷಣದ ಹಾದಿಯನ್ನು ಆಯ್ದುಕೊಂಡು, ಸ್ವತಃ ತಾವೇ ಶಿಕ್ಷಕಿಯಾಗಿ ಇತರೆ ಮಹಿಳೆಯರಿಗೆ ಪ್ರೇರಣೆಯಾದ ಧೀಮಂತ ಮಹಿಳೆ ಸಾವಿತ್ರಿಬಾಯಿ ಫುಲೆ ನಿಸ್ವಾರ್ಥ ಸೇವೆಯನ್ನು ನೆನೆದು, ಗೌರವ ನಮನ ಸಲ್ಲಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂದೇಶ ನೀಡಿದ್ದಾರೆ.

<><*<><>*><>

ಮೈಸೂರಿನ ಕರ್ನಾಟಕ ಕಲಾ ಮಂದಿರದಲ್ಲಿ ನಡೆಯುವ ವಾರ್ಷಿಕ ಬಹುರೂಪಿ ನಾಟಕೋತ್ಸವ ಇದೇ ೧೪ ರಿಂದ ಆರಂಭವಾಗಲಿದೆ. ಪೂರ್ವ ಸಿದ್ಧತಾ ಕಾರ್ಯಕ್ರಮ ಇಂದು ನಡೆಯಿತು. ಮೈಸೂರು ಜಿಲ್ಲೆಗೆ ರಂಗಾಯಣ ಒಂದು ಹೆಮ್ಮೆ, ನಾಡಹಬ್ಬ ದಸರಾ ಆಚರಣೆಯಂತೆ ಬಹುರೂಪಿ ನಾಟಕೋತ್ಸವ ಕೂಡ ಮೈಸೂರಿನ ಹೆಗ್ಗಳಿಕೆಯಾಗಿದೆ. ನಾಗರಿಕ ಸಮಾಜದ ಸ್ವಾಸ್ಥ್ಯ ಕಾಪಾಡುವ ನಿಟ್ಟಿನಲ್ಲಿ ಅತ್ಯುತ್ತಮ ನಾಟಕಗಳನ್ನು ಪ್ರದರ್ಶಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಹೇಳಿದರು. ಕಲಾಮಂದಿರ ಹಾಗೂ ರಂಗಾಯಣದ ಆವರಣದಲ್ಲಿ ನಾಟಕೋತ್ಸವಕ್ಕಾಗಿ ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲಾಗುವುದು. ನಾಟಕ ಪ್ರದರ್ಶನದ ದಿನಗಳಲ್ಲಿ ಮೈಸೂರಿನ ವಿವಿಧ ಬಡಾವಣೆಗಳಿಗೆ ಕಲ್ಪಿಸಲಾಗುತ್ತದೆ ಎಂದರು. ರಂಗಾಯಣದ ನಿರ್ದೇಶಕ ಸತೀಶ್ ತಿಪಟೂರು ಮಾತನಾಡಿ, ರಂಗಾಯಣ ಪ್ರಾರಂಭವಾಗಿ ೩೫ ವರ್ಷಗಳಾಗಿವೆ. ಬಹುರೂಪಿ ನಾಟಕೋತ್ಸವದಲ್ಲಿ ಈ ಬಾರಿ ಹಲವು ಭಾಷೆಗಳ ೨೪ ನಾಟಕಗಳನ್ನು ಪ್ರದರ್ಶಿಸಲಾಗುವುದು. ಮಕ್ಕಳ ನಾಟಕೋತ್ಸವಕ್ಕಾಗಿ ವಿಶೇಷ ವೇದಿಕೆ ವ್ಯವಸ್ಥೆಯಾಗಲಿದೆ ಎಂದು ತಿಳಿಸಿದರು.

<><*<><>*><>

ಮೈಸೂರಿನ ಜಯಚಾಮರಾಜೇಂದ್ರ ದೃಶ್ಯಕಲಾ ಕಾಲೇಜಿನ ಚಿತ್ರಕಲಾ ವಿದ್ಯಾರ್ಥಿಗಳು ಹಂಪಿಯಲ್ಲಿ ಇಂದು ಅಭ್ಯಾಸ ನಡೆಸಿದರು. ವಿಶ್ವ ಪರಂಪರೆಯ ತಾಣವಾದ ಹಂಪಿಯ ವಿಜಯ ವಿಠ್ಠಲ ದೇವಸ್ಥಾನ ಪರಿಸರದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕಲ್ಲಿನ ರಥ ವಿರೂಪಾಕ್ಷೇಶ್ವರ ದೇವಸ್ಥಾನ ಗೋಪುರ ಸೇರಿದಂತೆ ಅಲ್ಲಿನ ಅನೇಕ ಸ್ಮಾರಕಗಳ ಚಿತ್ರಗಳನ್ನು ಬಿಡಿಸಿದರು. ಬೆಂಗಳೂರು, ಮೈಸೂರು ಮತ್ತು ಮಹಾರಾಷ್ಟ್ರದ ಪುಣೆ ಆರ್ಟ್ ಅಂಡ್ ಆರ್ಕಿಟೆಕ್ಚರ್ ವಿದ್ಯಾರ್ಥಿಗಳು ಪ್ರತಿವರ್ಷ ಹಂಪಿಯಲ್ಲಿ ಅಧ್ಯಯನ ಶಿಬಿರದಲ್ಲಿ ಪಾಲ್ಗೊಳ್ಳುತ್ತಾರೆ.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಡಿಸೆಂಬರ್ ೩೦ ರಂದು ಶ್ರೀಹರಿಕೋಟಾದಿಂದ ಎರಡು ಉಪಗ್ರಹಗಳನ್ನು ಪಿಎಸ್‌ಎಲ್‌ವಿ-ಸಿ೬೦ ನೌಕೆಯ ಮೂಲಕ ಉಡಾವಣೆ ಮಾಡಿದ್ದು, ಉಪಗ್ರಹಗಳು ಈಗಾಗಲೇ ನಿಗದಿತ ಕಕ್ಷೆಗೆ ಸೇರಿವೆ. ಮುಂದಿನ ಹಂತದಲ್ಲಿ ಇದೇ ೭ ರಂದು ಡಾಕಿಂಗ್ ಪ್ರಯೋಗವನ್ನು ನಡೆಸಲು ಬೆಂಗಳೂರಿನ ಪೀಣ್ಯದಲ್ಲಿರುವ ಇಸ್ರೋ ಟೆಲಿಮೆಟ್ರಿ, ಟ್ರ್ಯಾಕಿಂಗ್, ಕಮಾಂಡ್ ನೆಟ್‌ವರ್ಕ್ ಕೇಂದ್ರ ಸಜ್ಜಾಗಿದೆ. ಅಂದು ಬೆಳಗ್ಗೆ ೯ ರಿಂದ ೧೦ ಗಂಟೆಯ ನಡುವೆ ಡಾಕಿಂಗ್ ಪ್ರಯೋಗ ನಡೆಸಲಾಗುವುದು ಎಂದು ಇಸ್ರೋ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಕಳೆದ ವರ್ಷಾರಂಭದಿಂದ ನವೆಂಬರ್‌ವರೆಗೆ ಒಂದು ಸಾವಿರದ ೫೮೫ ಕ್ಷಯರೋಗಿಗಳನ್ನು ಪತ್ತೆ ಮಾಡಲಾಗಿದ್ದು, ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ನೀಲೇಶ ಎಂ.ಎನ್. ತಿಳಿಸಿದ್ದಾರೆ. ಜಿಲ್ಲಾ ಮಟ್ಟದ ಕ್ಷಯರೋಗ ಸಮಿತಿ ಸಭೆಯಲ್ಲಿ ಮಾಹಿತಿ ನೀಡಿದ ಅವರು, ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಆಶಾ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ ಮನೆ ಮನೆಗೆ ಹೋಗಿ ಪರಿಶೀಲಿಸುತ್ತಿದ್ದಾರೆ. ಕ್ಷಯರೋಗದ ಲಕ್ಷಣಗಳು, ಚಿಕಿತ್ಸೆ ಕ್ರಮಗಳು, ಸಹಾಯಧನ ಸೇರಿದಂತೆ ವಿವಿಧ ಮಾಹಿತಿಗಳ ಪ್ರಚಾರ ಮಾಡಲಾಗುತ್ತಿದೆ. ಇದೇ ಮಾರ್ಚ್‌ವರೆಗೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

**ಸಂಕ್ಷಿಪ್ತ ಸುದ್ದಿ...**

೧. ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಇತ್ತೀಚೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ ಹೇಳಿಕೆಯನ್ನು ವಿರೋಧಿಸಿ, ಕೋಲಾರದಲ್ಲಿ ಇಂದು ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿದವು. ನಗರದಲ್ಲಿ ಬಸ್ ಸಂಚಾರ ಬಂದ್ ಮಾಡಲಾಗಿದೆ. ಹಲವೆಡೆ ರಸ್ತೆ ತಡೆ ನಡೆಯಿತು. ಸೂಕ್ತ ಬಂದೋಬಸ್ತ್ ಮಾಡಲಾಗಿದೆ.

೨. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಮಾಜಿ ಅಧ್ಯಕ್ಷ ಎಚ್.ಟಿ. ಬಳಿಗಾರ್ ನಿನ್ನೆ ರಾತ್ರಿ ನಿಧನರಾದರು. ಇಂದು ಸಂಜೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**